# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂ.ವಿ./ಪ.ವಿ./ಎಂ.ಸಿ.ಎ./2022-23/ಇ.15

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 17.08.2022

**ಪ್ರಕಟಣೆ**

ವಿಷಯ: ಅಕ್ಟೋಬರ್ 2022ರಲ್ಲಿ ನಡೆಯಲಿರುವ ಎಂ.ಸಿ.ಎ. ದ್ವಿತೀಯ ಸೆಮಿಸ್ಟರ್ ಪರೀಕ್ಷೆಯ ಬಗ್ಗೆ.

--------

ಮಂಗಳೂರು ವಿಶ್ವವಿದ್ಯಾನಿಲಯದ 2021-22ನೇ ಶೈಕ್ಷಣಿಕ ವರ್ಷದ ಎಂ.ಸಿ.ಎ. ದ್ವಿತೀಯ ಸೆಮಿಸ್ಟರ್ ನಿಯಮಿತ ಮತ್ತು ಪುನರಾವರ್ತಿತ ಪರೀಕ್ಷೆಗಳು ದಿನಾಂಕ 19.10.2022ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು ಹಾಗೂ ಸದರಿ ಪರೀಕ್ಷೆಗಳಿಗೆ ಹಾಜರಾಗಲಿರುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. ದ್ವಿತೀಯ ಸೆಮಿಸ್ಟರ್ ನಿಯಮಿತ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ **UUCMS Portal** ನಲ್ಲಿ ನೋಂದಣಿ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಪರೀಕ್ಷಾ ಶುಲ್ಕವನ್ನು Online ನಲ್ಲಿಯೇ **UUCMS Portal** ನ ಮುಖಾಂತರ ಪಾವತಿಸತಕ್ಕದ್ದು.

2. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು. ದ್ವಿತೀಯ ಸೆಮಿಸ್ಟರ್ ಪುನರಾವರ್ತಿತ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು MuLinx ಮುಖಾಂತರ ಸಲ್ಲಿಸುವುದು.

3. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು

4. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 120.00 (ರೂಪಾಯಿ ನೂರ ಇಪ್ಪತ್ತು)ನ್ನು ಪಾವತಿಸುವುದು.

5. ***ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.***

6. ***ಕುಲಸಚಿವರಿಂದ ಪ್ರವೇಶಾತಿ ಅನುಮೋದನೆಯಾಗದ / ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ವಿಭಾಗ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ವಿಭಾಗ ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.**

7. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ವಿಭಾಗ ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ವಿಭಾಗಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು ನಿಗಾವಹಿಸತಕ್ಕದ್ದು.

8. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಃಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*

9. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ. ವಿಶ್ವವಿದ್ಯಾನಿಲಯದ ತಿದ್ದುಪಡಿ ವಿನಿಯಮದ ಪ್ರಕಾರ 2013 ಹಾಗೂ ಅದರ ಹಿಂದಿನ ಸಾಲಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ವಿಶೇಷ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗಿರುತ್ತಾರೆ.* ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ಇಲ್ಲವಾದಲ್ಲಿ ವಿಭಾಗದ ಮುಖ್ಯಸ್ಥರೇ ಜವಾಬ್ದಾರರಾಗುವರು.

10. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ದಂಡಶುಲ್ಕ ಸಹಿತ) ವಿಭಾಗ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

**ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:**

**ದಂಡ ಶುಲ್ಕ ರಹಿತ**: ದ್ವಿತೀಯ ಸೆಮಿಸ್ಟರ್ (ಪುನರಾವರ್ತಿತ) . . . 25.08.2022

(ನಿಯಮಿತ) . . . 15.09.2022

**ದಂಡ ಶುಲ್ಕ ದಿನವೊಂದಕ್ಕೆ ರೂ. 265/-ರಂತೆ:**

ದ್ವಿತೀಯ ಸೆಮಿಸ್ಟರ್ (ಪುನರಾವರ್ತಿತ). . . 26.08.2022 ರಿಂದ 01.09.2022 ರವರೆಗೆ

(ನಿಯಮಿತ) . . . 16.09.202 ರಿಂದ 22.09.2022 ರವರೆಗೆ

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

12. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ವಿಭಾಗದಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿಕೊಡಬೇಕು ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿವರವಾಗಿ ನಮೂದಿಸಬೇಕು.

13. ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ದರಗಳು :

**ದ್ವಿತೀಯ ಸೆಮಿಸ್ಟರ್:** ಎಂ.ಸಿ. ಎ. **ಪೂರ್ಣ ಪರೀಕ್ಷೆಗೆ** ರೂ.1,930.00

**ವಿಷಯವೊಂದಕ್ಕೆ** ರೂ. 610.00

14. ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

15. ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ರೂ.230.00 ಅಂಕಪಟ್ಟಿ ಶುಲ್ಕ ಮತ್ತು ರೂ. 120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕಗಳನ್ನು ಪಾವತಿಸತಕ್ಕದ್ದು.

16. ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಎಲ್ಲಾ ಶುಲ್ಕದ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

17. ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ. ಸದ್ರಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ವಿಭಾಗದ ಮುಖ್ಯಸ್ಥರು ಸಮಾಜ ಕಲ್ಯಾಣ ಇಲಾಖೆಯಿಂದ ಮರುಭರಣೆ ಪಡೆದು ಹಿಂದಿನ ವರ್ಷಗಳ ಶುಲ್ಕ ಬಾಕಿಯಿದ್ದಲ್ಲಿ ಅದನ್ನು ವಿಶ್ವವಿದ್ಯಾನಿಲಯದ ನಿಧಿಗೆ ಜಮೆ ಮಾಡುವಂತೆ ತಿಳಿಸಲಾಗಿದೆ.

ಆ) ಪ್ರ. ವರ್ಗ-1 (ಆದಾಯ ಮಿತಿ ರೂ.2,50,000.00 ಮೀರದ) ಹಾಗೂ ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ. 1,00,000.00ಕ್ಕಿಂತ ಕಡಿಮೆ ಇರುವ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ತದನಂತರ ವಿಭಾಗದ ಮುಖ್ಯಸ್ಥರ ಮೂಲಕ ಸಂಬಂಧಪಟ್ಟ ಇಲಾಖೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಬ್ಯಾಂಕ್ ಖಾತೆಗೆ ಜಮೆ ಮಾಡುವ ಬಗ್ಗೆ ಕ್ಲೇಮು ಸಲ್ಲಿಸುವುದು.

ಇ) ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯುವ ವಿದ್ಯಾರ್ಥಿಗಳೂ ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳು ರೂ. 230.00 ಅಂಕಪಟ್ಟಿ ಶುಲ್ಕ ಮತ್ತು ರೂ. 120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

18. ವಿದ್ಯಾರ್ಥಿಗಳಿಂದ ಪಡೆದ ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯದ ನಿಧಿಗೆ ಪಾವತಿಸತಕ್ಕದ್ದು

ಅ) ಅರ್ಜಿ ಶುಲ್ಕ ... 008/14
ಆ) ಪರೀಕ್ಷಾ ಶುಲ್ಕ ... 008/23
ಇ) ಅಂಕಪಟ್ಟಿ ಶುಲ್ಕ ... 008/24

19. ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ಈ ಕಛೇರಿಗೆ ದಿನಾಂಕ 26.09.2022ರ ಒಳಗಾಗಿ ತಪ್ಪದೆ ಕಳುಹಿಸಿಕೊಡುವುದು.

ಅ) ಆನ್‌ಲೈನ್ ಅಭ್ಯರ್ಥನ ಪಟ್ಟಿ - ದ್ವಿಪ್ರತಿಗಳಲ್ಲಿ.

***ಆ)*** ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಒಂದು ಚಲನ್ ಅಥವಾ ಡಿ.ಡಿ.ಯನ್ನು ***ದಿನಾಂಕ 26.09.2022ರ ಒಳಗೆ ಈ ಕಛೇರಿಗೆ ತಪ್ಪದೆ ಕಳುಹಿಸಿಕೊಡತಕ್ಕದ್ದು.***

ಇ) ಹಣಕಾಸು ತಃಖ್ತೆ - ಆನ್‌ಲೈನ್ ಪ್ರಿಂಟ್

ಈ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತಃಖ್ತೆ. ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೆ ಕಳುಹಿಸಿಕೊಡಬೇಕು.

20. ಪರೀಕ್ಷಾ ಪ್ರಶ್ನೆ ಪತ್ರಿಕೆಗಳ ಬೇಡಿಕೆಯ ತಃಖ್ತೆ. ಹಳೆ ಪಠ್ಯ ಪದ್ಧತಿಯ ಪ್ರಕಾರ ಪುನರಾವರ್ತಿತ ವಿದ್ಯಾರ್ಥಿಗಳು ಹಾಜರಾಗುವುದಿದ್ದಲ್ಲಿ ಪುನರಾವರ್ತಿತ ಪರೀಕ್ಷೆಗಳಿಗೆ ಅಗತ್ಯವಿರುವ ಪ್ರಶ್ನೆ ಪತ್ರಿಕೆ ಬೇಡಿಕೆ ಪಟ್ಟಿಯನ್ನು ಪ್ರತ್ಯೇಕವಾಗಿ ನೀಡುವುದು. ಪ್ರಶ್ನೆ ಪತ್ರಿಕೆ ಬೇಡಿಕೆ ಪಟ್ಟಿಗಳನ್ನು (ದ್ವಿಪ್ರತಿಗಳಲ್ಲಿ) ***ದಿನಾಂಕ 16.09.2022ರ ಒಳಗೆ ತಪ್ಪದೆ ಈ ಕಛೇರಿಗೆ ಕಳುಹಿಸಿಕೊಡತಕ್ಕದ್ದು.***

21. **ಆಂತರಿಕ ಮೌಲ್ಯಮಾಪನದ ಅಂಕಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ, ಅಂತಿಮ ಆನ್‌ಲೈನ್ ಪ್ರಿಂಟಿಂಗ್ ಪ್ರತಿಗಳನ್ನು(ದ್ವಿಪ್ರತಿಗಳಲ್ಲಿ) ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ 8 ದಿನಗಳ ಮುಂಚಿತವಾಗಿ ಈ ಕಛೇರಿಗೆ ತಪ್ಪದೆ ಸಲ್ಲಿಸಲು ತಿಳಿಸಲಾಗಿದೆ.**

14/08/2022

(FOR) **ಕುಲಸಚಿವರು (ಪರೀಕ್ಷಾಂಗ)**

**ರಿಗೆ:** ಅಧ್ಯಕ್ಷರು, ಕಂಪ್ಯೂಟರ್ ಸೈನ್ಸ್ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ, ಸೂಚನಾಫಲಕದಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.

**ಪ್ರತಿ:**

1. ಡೀನರು, ಕಲೆ, ವಾಣಿಜ್ಯ, ವಿಜ್ಞಾನ ಮತ್ತು ಶಿಕ್ಷಣ ನಿಕಾಯ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು / ಕರ್ನಾಟಕ / ಮೈಸೂರು / ಗುಲ್ಬರ್ಗಾ / ಕುವೆಂಪು ವಿಶ್ವವಿದ್ಯಾನಿಲಯ.
3. ಕುಲಸಚಿವರು/ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
4. ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
5. ವಿಶೇಷಾಧಿಕಾರಿ (ಪರೀಕ್ಷಾಂಗ) 1 ಮತ್ತು 2, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ. .
6. ವಿಶೇಷಾಧಿಕಾರಿ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಘಟಕ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
7. ಎಲ್ಲಾ ಅಧೀಕ್ಷಕರು/ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
8. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ, ಕಾಲೇಜು ಆವರಣ, ಮಂಗಳೂರು
9. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಜಿಲ್ಲಾಧಿಕಾರಿ ಆಫೀಸಿನ ಬಳಿ, ಮಂಗಳೂರು.
10. ಆಪ್ತ ಸಹಾಯಕರು, ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
11. ಇ.9/ಇ.11 ವಿಷಯ ನಿರ್ವಾಹಕರು/ಕಂಪ್ಯೂಟರ್ ವಿಭಾಗಕ್ಕೆ ಮಾಹಿತಿಗಾಗಿ.